ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು
ದಿನಾಂಕ: 13.12.2023

ಸಂಖ್ಯೆ:ಜಿಎಲ್13/110/2022-23

## ಸುತ್ತೋಲೆ

ವಿಷಯ: ದಿನಾಂಕ: 18.12.2023ರಂದು "ಅಭಿ ವಿನ್ಯಾಸ ಕಾರ್ಯಕ್ರಮ"ದಲ್ಲಿ ಭಾಗವಹಿಸುವ ಬಗ್ಗೆ.
ಉಲ್ಲೇಖ: ಮಾನ್ಯ ಕುಲಪತಿಯವರ ಟಿಪ್ಪಣಿ ಸಂಖ್ಯೆ:ಕುಪ/2023-24, ದಿನಾಂಕ: 12.12.2023

-:-

ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗದ ಅಧ್ಯಕ್ಷರು/ನಿರ್ದೇಶಕರುಗಳಿಗೆ ತಿಳಿಸುವುದೇನೆಂದರೆ, ದಿನಾಂಕ:18.12.2023ರಂದು ಬೆಳಗ್ಗೆ 10.00 ಗಂಟೆಗೆ ಮಾನಸಗಂಗೋತ್ರಿಯ ಸೆನೆಟ್ ಭವನದ ಸಭಾಂಗಣದಲ್ಲಿ ಸ್ನಾತಕೋತ್ತರ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ "ಅಭಿ ವಿನ್ಯಾಸ ಕಾರ್ಯಕ್ರಮ"(Orientation Programme)ವನ್ನು ಏರ್ಪಡಿಸಲಾಗಿದೆ. ಈ ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷರಾದ ಪ್ರೊ. ಎಸ್.ಆರ್. ನಿರಂಜನ, ವಿಶ್ರಾಂತ ಕುಲಪತಿಗಳು, ಇವರು ಉದ್ಘಾಟಿಸಲಿದ್ದಾರೆ ಹಾಗೂ ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯದ ದಕ್ಷಿಣ ವಲಯದ ಡಿ.ಐ.ಜಿ.ಪಿ. ಡಾ. ಎಂ.ಬಿ. ಬೋರಲಿಂಗಯ್ಯ, ಐ.ಪಿ.ಎಸ್, ಇವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಸದರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನ್ಯ ಕುಲಪತಿಗಳಾದ ಪ್ರೊ. ಎನ್.ಕೆ. ಲೋಕನಾಥ್ ಇವರು ವಹಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಎಲ್ಲಾ ಪ್ರಥಮ ವರ್ಷದ ವಿದ್ಯಾರ್ಥಿಗಳು ಹಾಗೂ ಎಲ್ಲಾ ಅಧ್ಯಾಪಕರುಗಳು ಕಡ್ಡಾಯವಾಗಿ ಭಾಗವಹಿಸಲು ತಿಳಿಸುವುದು ಹಾಗೂ ತರಗತಿಗಳಿಗೆ ಬಿಡುವು ನೀಡುವಂತೆ ತಿಳಿಸಲಾಗಿದೆ.

13/12/2023
ಕುಲಸಚಿವ

ಗೆ,

1. ಆಡಳಿತಾಧಿಕಾರಿ, ಮಾನಸಗಂಗೋತ್ರಿ, ಮೈಸೂರು – ಸದರಿ ಕಾರ್ಯಕ್ರಮದ ಉಸ್ತುವಾರಿ ವಹಿಸಿಕೊಂಡು ಕಾರ್ಯಕ್ರಮಕ್ಕೆ ಎಲ್ಲಾ ವ್ಯವಸ್ಥೆಯನ್ನು ಮಾಡುವಂತೆ ಕ್ರಮ ಕೈಗೊಳ್ಳುವುದು.
2. ಅಧ್ಯಕ್ಷರು/ನಿರ್ದೇಶಕರು ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು ಮಾನಸಗಂಗೋತ್ರಿ, ಮೈಸೂರು.
3. ನಿರ್ದೇಶಕರು, ಐ.ಕ್ಯೂ.ಎ.ಸಿ, ಮಾನಸಗಂಗೋತ್ರಿ, ಮೈಸೂರು.
4. ನಿರ್ದೇಶಕರು, ಐ.ಸಿ.ಡಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು– ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
5. ಉಪ ಕುಲಸಚಿವರು(ಸಾಮಾನ್ಯ)/ಸಹಾಯಕ ಕುಲಸಚಿವರು(ಸಾಮಾನ್ಯ)/ಅಧೀಕ್ಷಕರು(ಸಾಮಾನ್ಯ) ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಕುಲಪತಿಯವರ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕಡತಕ್ಕೆ.